**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಚಿಂತಾಮಣಿ.**

| ಸಿ.ಸಿ.ನಂ. 2397/2023 | | | |
|---|---|---|---|
| ಸಾಕ್ಷಿದಾರರ ಹೆಸರು | ಹುಸೇನ್ | | |
| ತಂದೆ:ಹೆಸರು | ಫಕ್ರುದ್ದೀನ್ | ಪಿಡಬ್ಲೂ: | 4 |
| ವಯಸ್ಸು: | 51 ವರ್ಷ | ಸಿಡಬ್ಲೂ: | 4 |
| ಉದ್ಯೋಗ: | ವ್ಯವಸಾಯ | | |
| ವಾಸ ಸ್ಥಳ: | ಕಾಗತಿ ಗ್ರಾಮ | | |

**ದಿನಾಂಕ: 17-08-2026 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋದಿಸಲಾಯಿತು.**

**ಮುಖ್ಯ ವಿಚಾರಣೆ: ಮಾನ್ಯ ಸ ಸ ಅ ರವರಿಂದ:-**

ಈಗ ನ್ಯಾಯಾಲಯದ ಮುಂದೆ ಇರುವ ಆರೋಪಿಯ ಪರಿಚಯ ಇದೆ. ಚಾಸಾ-1 ಮತ್ತು 2 ರವರ ಪರಿಚಯ ಇಲ್ಲ. ಈ ಕೇಸಿನ ವಿಚಾರ ಗೊತ್ತಿರುವುದಿಲ್ಲ. ನಾನು ಪೊಲಿಸರ ಮುಂದೆ ಯಾವುದೇ ಹೇಳಿಕೆ ನೀಡಿರುವುದಿಲ್ಲ.

**(ಈ ಹಂತದಲ್ಲಿ ಮಾನ್ಯ ಸ.ಸ.ಅ ರವರು, ಸದರಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಪಾಟೀಸವಾಲು ಮಾಡಲು ಅನುಮತಿಯನ್ನು ಕೋರಿದ್ದು, ಅನುಮತಿಯನ್ನು ನೀಡಲಾಯಿತು.)**

**ಪಾಟೀ ಸವಾಲು:: ಮಾನ್ಯ ಸ ಸ ಅ ರವರಿಂದ:-**

ದಿನಾಂಕ: 25.07.2023 ರಂದು ರಾತ್ರಿ 7.30 ಗಂಟೆ ಸಮಯದಲ್ಲಿ ಕೆ 40 ಎಫ್ 872 ಕೆ ಎಸ್ ಆರ್ ಟಿ ಸಿ ಬಸ್ಸಿನಲ್ಲಿ ನಾನು ಪ್ರಯಣ ಮಾಡುತ್ತಿದ್ದಾಗ ಚಳೂರು ವೃತ್ತದಲ್ಲಿದ್ದಾಗ ಇಬ್ಬರು ಗಂಡಸರು ನಿಂತಿಕೊಂಡಿದ್ದು ಕೆ ಎಸ್ ಆರ್ ಟಿ ಸಿ ನಿರ್ವಾಹಕನನ್ನು ಬಸ್ ಎಲ್ಲಿಗೆ ಹೋಗುತ್ತಿದ್ದೆ

ಎಂದು ಕೇಳಿದರು. ನೀವು ಎಲ್ಲಿಗೆ ಹೋಗಬೇಕು ಎಂದು ಕೇಳಿದಾಗ ಆರೋಪಿ 1 ಮತ್ತು 2 ಇಬ್ಬರು ಸೇರಿಕೊಂಡು ಸರ್ಕಾರಿ ಕೆಲಸಕ್ಕೆ ಅಡ್ಡಿಪಡಿಸಿ ಅವ್ಯಾಚ್ಯ ಶಬ್ದಗಳಿಂದ ಬೈದು ಹಲ್ಲೆ ಮಾಡಿರುತ್ತಾರೆ ನಿವು ಗಲಾಟೆ ಬಿಡಿಸರುತ್ತೀರಾ ಎಂದು ಈಗ ಓದಿ ಹೇಳಿದಂತೆ ದಿನಾಂಕಃ 27.07.2023 ರಂದು ಪೊಲಿಸರ ಮುಂದೆ ಹೇಳಿಕೆ ನೀಡಿರುತ್ತೀರಾ ಎಂದರೆ ಸರಿಯಲ್ಲ. ಸಾಕ್ಷಿಯ ಹೇಳಿಕೆಯನ್ನು ನಿಪಿ–5 ಎಂದು ಗುರುತಿಸಲಾಯಿತು. ಈ ಎಲ್ಲಾ ವಿಚಾರ ಗೊತ್ತಿದ್ದರೂ ಸಹ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೀರಿ ಎಂದರೆ ಸರಿಯಲ್ಲ.

**ಪಾಟೀಸವಾಲುಃ ಶ್ರೀ.ಡಿ ಕೆ ಆರೋಪಿ ಪರ ವಕೀಲರಿಂದಃ– ಇಲ್ಲ.**

**ಮರು ವಿಚಾರಣೆ ಇಲ್ಲ.**

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಸಾಕ್ಷಿಯ ಹೇಳಿಕೆಯನ್ನು ಬೆರಳಚ್ಚು ಮಾಡಲಾಯಿತು.)**

**ಓ ಹೇ ಕೇ ಸ ಇದೆ.**

Sd/-
ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಚಿಂತಾಮಣಿ.